ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪೌರತ್ವ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 28/12/2019

# ಪೌರತ್ವ ಕಾಯಿದೆಯಿಂದ ಮುಸ್ಲಿಮ್ಮರಿಗೆ ಸಮಸ್ಯೆ ಇಲ್ಲ

**ಬೀದರ್:** ಪೌರತ್ವ ತಿದ್ದುಪಡಿ ಕಾಯಿದೆ ಜಾರಿಯಿಂದ ಮುಸ್ಲಿಂ ಬಾಂಧವರಿಗೆ ಯಾವುದೇ ರೀತಿಯ ತೊಂದರೆ ಇಲ್ಲ, ಈಗ ಬಗ್ಗೆ ಚರ್ಚಿಸಲು ಬೇಕಾದರೆ ವೇದಿಕೆಯನ್ನು ಸಿದ್ಧಪಡಿಸುತ್ತೇನೆ ಎಂದು ಸಂಸದ ಭಗವಂತ ಖೂಬಾ ಸವಾಲು ಹಾಕಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿಪಕ್ಷ ಪ್ರತಿಭಟನೆಗೆ ಪ್ರಚೋದಿಸುತ್ತಿದೆ. ಅಷ್ಟೇ ಅಲ್ಲ ಫಂಡಿಂಗ್ ಸಹ ಮಾಡುತ್ತಿದೆ ಎಂದು ಗಂಭಿರ ಆರೋಪ ಮಾಡಿದರು. ಮಾಜಿ.ಸಚಿವ ಡಿ.ಕೆ ಶಿವಕುಮಾರ್ ಅವರು ಕನಕಪುರದಲ್ಲಿ ವಿಶ್ವದ ಎತ್ತರದ ಏಸು ಕ್ರಿಸ್ತನ ಮೂರ್ತಿ ನಿರ್ಮಾಣ ಮಾಡುತ್ತಿದ್ದಾರೆ. ಕೆಪಿಸಿಸಿ ಅಧ್ಯಕ್ಷಗಿರಿಗಾಗಿ ವರಿಷ್ಠೆ ಸೋನಿಯಾ ಗಾಂಧಿ ಅವರಿಂದ ಶಹಬ್ಬಾಶ್ ಗಿರಿ ಪಡೆಯಲು ಈ ಕೆಲಸ ಮಾಡುತ್ತಿದ್ದಾರೆ ಎಂದರು.

ಕುಂಬಳಕಾಯಿ ಕಳ್ಳ ಎಂದರೆ ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ್ ಖಂಡ್ರೆ ತಮ್ಮ ಹೆಗಲು ಮುಟ್ಟಿಕೊಂಡು ನೋಡಿಕೊಳ್ಳುತ್ತಾರೆ. ಖಂಡ್ರೆ ತಮ್ಮ ಕ್ಷೇತ್ರದಲ್ಲಿ ಉಳ್ಳವರಿಗೆ ಮಾತ್ರ ವಸತಿ ಮನೆಗಳನ್ನು ನೀಡಿದ್ದು, ಇನ್ನೂ ಕೆಲವರಿಗೆ ಮನೆ ನೀಡದೆ ಹಣ ಕೊಳ್ಳೆ ಹೊಡೆದಿದ್ದಾರೆ. ನಾನು ವಸತಿ ಯೋಜನೆಯಲ್ಲಿ ಅವ್ಯವಹಾರ ನಡೆಸಿದ್ದರೆ ರಾಜಕೀಯ ಸನ್ಯಾಸ ತೆಗೆದುಕೊಳ್ಳುತ್ತೇನೆ ಎಂದು ಹೇಳುತ್ತಾರೆ. ತಾವು ಸಿಕ್ಕಿಹಾಕಿಕೊಳ್ಳುತ್ತಾರೆ ಎಂಬ ಭಯಕ್ಕೆ ಬಿಜೆಪಿ ಸರಕಾರದ ವಿರುದ್ಧ ಹೋರಾಟ ಮಾಡುತ್ತೇನೆ ಎಂದು ಹೇಳುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

> **ಕಾಂಗ್ರೆಸ್‌ನ ಪ್ರಿಯಾಂಕಾ ಗಾಂಧಿ ನಗರ ನಕ್ಸಲರ ನಾಯಕಿಯಂತೆ ಮಾತನಾಡುತ್ತಿದ್ದಾರೆ. ಅವರು ಪೌರತ್ವ ತಿದ್ದುಪಡಿ ಕಾಯಿದೆ ದೇಶಕ್ಕೆ ಕಪ್ಪು ಚುಕ್ಕೆ ತರುವಂತಹದ್ದು ಎಂದು ಹೇಳಿಕೆ ನೀಡಿರುವುದು ಖಂಡನೀಯ. ಸಂವಿಧಾನ ನಮ್ಮ ದೇಶದ ಧರ್ಮ ಗ್ರಂಥವಾಗಿದೆ. ಬಿಜೆಪಿ ಸರಕಾರ ಇನ್ನತ್ತಿಗೂ ಸಂವಿಧಾನಕ್ಕೆ ಕಪ್ಪು ಚುಕ್ಕೆ ತರುವಂತಹ ಕಾರ್ಯವನ್ನು ಮಾಡಿಲ್ಲ.**
>
> **-ಭಗವಂತ ಖೂಬಾ ಸಂಸದ**